**ಕರ್ನಾಟಕ ಸರ್ಕಾರ**

ನಂ : ಎಎಲ್ಎನ್ [ಪೂ.ಬಿ.ಬಿ] ಎಸ್ಆರ್ 55/2010-11

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ : 15.2.2011.

**ಅ ಧಿ ಕೃ ತ ಜ್ಞಾ ಪ ನ**

ವಿಷಯ: ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದ ಸರ್ವೆ ನಂ : 112/3 ರಲ್ಲಿ 1-01 ಎಕರೆ / ಗುಂಟೆ, ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ, ವಾಸದ ಉದ್ದೇಶಕ್ಕೆ ಭೂ ಪರಿವರ್ತನೆ ಕೋರಿ ಶ್ರೀ ಎಸ್. ಸತೀಶ್ ಬಿನ್ ಶ್ರೀನಿವಾಸರೆಡ್ಡಿ, ಕಿತ್ತಗನೂರು ಗ್ರಾಮ, ಕೆ.ಆರ್.ಪುರ ಅಂಚೆ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ರವರು ಸಲ್ಲಿಸಿರುವ ಅರ್ಜಿ ದಿನಾಂಕ : 29.10.2010.

ಉಲ್ಲೇಖ :
1. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 7 ಎಲ್‌ಜಿಪಿ 1995, ದಿನಾಂಕ : 7.6.1999.
2. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 56 ಎಲ್‌ಜಿಪಿ 2008, ದಿನಾಂಕ : 10.9.2008 & 24.9.2008.
3. ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರುರವರ ವರದಿ ನಂ : ಎಎಲ್ಎನ್ ಎಸ್‌ಆರ್ 98/2010-11, ದಿನಾಂಕ : 2.12.2010
4. ಭೂ ಪರಿವರ್ತನಾ ಶುಲ್ಕ ರೂ. 55,812-00 ಅನಧಿಕೃತ ಕಟ್ಟಡ ದಂಡ ಶುಲ್ಕ ರೂ. 15,640-00 ಹಾಗೂ ಪೋಡಿ ಶುಲ್ಕ ರೂ. 55-00 ಸೇರಿ ಒಟ್ಟು ರೂ. 71,507-00 ಗಳನ್ನು ಚಲನ್ ದಿನಾಂಕ : 9.2.2011 ರಂತೆ ಖಜಾನೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ಸಹಾಯಕ ನಿರ್ದೇಶಕರು, [ದಕ್ಷಿಣ], ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ : ಬೆಂಅಪ್ರಾ ನಯೋಸ ಜಿಸಿ 1376/3909/2010-11, ದಿನಾಂಕ : 3.1.2011 & ವಿಶೇಷ ಅಪರ ಭೂ ಸ್ವಾಧೀನಾಧಿಕಾರಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ : ಬೆಂಅಪ್ರಾ ವಿಅಭೂಸ್ವಾಅ 203/2010-11, ದಿನಾಂಕ : 30.12.2010.
6. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ : ಬೆಂಅಪ್ರಾ ನಯೋಸ 2052/1864/2008-09, ದಿನಾಂಕ : 20.10.2008.

% % % % % %

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95[2], 95[4] ಮತ್ತು 95[7] ರ ಷರತ್ತುಗಳು, ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ [ತಿದ್ದುಪಡಿ] ನಿಯಮಗಳು 1994ರ ನಿಯಮ 107[1] ರಂತೆ ಎಕರೆ ಒಂದಕ್ಕೆ ರೂ 54,450-00 [ಐವತ್ತು ನಾಲ್ಕು ಸಾವಿರದ ನಾಲ್ಕು ನೂರ ಐವತ್ತು ರೂ. ಗಳು ಮಾತ್ರ] ಗಳಂತೆ ಅರ್ಜಿದಾರರು ಉಲ್ಲೇಖ [4] ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿ ಚಲನ್‌ನ್ನು ಹಾಜರು ಪಡಿಸಿರುವ ಮೇರೆಗೆ ಅರ್ಜಿದಾರರಾದ ಶ್ರೀ ಎಸ್. ಸತೀಶ್ ಬಿನ್ ಶ್ರೀನಿವಾಸರೆಡ್ಡಿ, ಕಿತ್ತಗನೂರು ಗ್ರಾಮ, ಕೆ.ಆರ್.ಪುರ ಅಂಚೆ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ರವರ ಅರ್ಜಿಯನ್ನು ಪರಿಗಣಿಸಿ ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದ ಸರ್ವೆ ನಂ : 112/3 ರಲ್ಲಿ 1-01 ಎಕರೆ / ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ, **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಪಿ.ಸಿ.ಬಿ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ** ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವ ವರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.
2. ಈ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕೆ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಆಯುಕ್ತರು, **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಎ.ಪಿ.ಎ** ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಖಾಲಿ ಜಾಗ ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಎ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ** ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕೆ ಕಾಯ್ದಿರಿಸತಕ್ಕದ್ದು.

5. **ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೇ ನಿವೇಶನಗಳನ್ನು / ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ / ಉಪ ನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ. ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ** ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತಿಯ ಒದಗಿಸಿ ಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. **ಈ ಜಮೀನಿಗೆ ತಾಕು ಘೂಟು ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು ಹಾಗೂ ಪ್ರಸ್ತುತ ಬಿ ಖರಾಬು ವಿಸ್ತೀರ್ಣದ ಜಮೀನನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿಲ್ಲ. ಈ ಬಿ ಖರಾಬಿನ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಸೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮುದಿಸತಕ್ಕದ್ದು.**

8. ಸರ್ಕಾರದ ಆದೇಶ ಸಂಖ್ಯೆ : ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ಸಂಖ್ಯೆ : ಪಿ1/7[11]67, ದಿನಾಂಕ : 1.1.1966 ರಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ **ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆರ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು.** ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ / ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ / ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪರಿಷ್ಕೃತ ಮಾಸ್ಟರ್ ಪ್ಲಾನ್ 2015ರಲ್ಲಿ ಸೂಕ್ಷ್ಮ ವಲಯ [*Sensitive Zone*] ನಲ್ಲಿ ಬರುವ ಪ್ರದೇಶಗಳಿಗೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ಇವರಿಗೆ ಭೂ ಪರಿವರ್ತನೆ ಬಗ್ಗೆ ಮಾಹಿತಿ ನೀಡುವಾಗ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಭಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದೆಂಬ ಷರತ್ತನ್ನು ವಿಧಿಸುವುದು.

13. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಮದ ರಚಿತವಾದ ಉಪಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

14. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಲ್ಲಿ, ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 136 [3] ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

15. ಸದರಿ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

16. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ದೃಢಪಟ್ಟಲ್ಲಿ ನಂತರ ಇನ್ನಾವುದೇ ತಿಳುವಳಿಕೆ ಇಲ್ಲದೆ ಈ ಅಧಿಕೃತ ಜ್ಞಾಪನ ತನ್‌ತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ

17. ಮೇಲ್ಕಂಡ ಯಾವುದೇ ಷರತ್ತುಗಳು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

## ಷೆ ಡ್ಯೂ ಲ್ ವಿ ವ ರ

ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದ ಸರ್ವೆ ನಂ 112/3 ರಲ್ಲಿ 1–01 ಎಕರೆ / ಗುಂಟೆ ವಿಸ್ತೀರ್ಣಕ್ಕೆ ವಾಸದ ಉದ್ದೇಶಕ್ಕೆ ಭೂ ಪರಿವರ್ತಿತ ಜಮೀನಿಗೆ ಚೆಕ್ಕುಬಂದಿ :

ಗ್ರಾಮ : ಕಿತ್ತಗನೂರು

| | | |
|---|---|---|
| ಸರ್ವೆ ನಂ | : | 112/3 |
| ಪೂರ್ವಕ್ಕೆ | : | ಸರ್ವೆ ನಂ : 101 & 102 |
| ಪಶ್ಚಿಮಕ್ಕೆ | : | ಲಾಗು ಹಿಸ್ಸೆ 112/2 |
| ಉತ್ತರಕ್ಕೆ | : | ಸರ್ವೆ ನಂ : 112/3ರ ಉಳಿಕೆ |
| ದಕ್ಷಿಣಕ್ಕೆ | : | ರಸ್ತೆ |

ಸಹಿ/–
[ಜಿ. ಎಸ್. ನಾಯಕ್]
ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ.

1. ತಹಸೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ ಮೂಲ ಕಡತ ಹಾಗೂ ಚಲನ್‌ನೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಗಣಕೀಕೃತ ಆರ್.ಟಿ.ಸಿ.ಯಲ್ಲಿ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸಲಾಗುವುದು.
2. ನಗರ & ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು & ಸದಸ್ಯ ಕಾರ್ಯದರ್ಶಿ, ಹೊಸಕೋಟೆ ಯೋಜನಾ ಪ್ರಾಧಿಕಾರ, ಹೊಸಕೋಟೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3. ಉಪವಿಭಾಗಾಧಿಕಾರಿಗಳು ಬೆಂಗಳೂರು ಉತ್ತರ ಉಪವಿಭಾಗ, ಬೆಂಗಳೂರು.
4. ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5. ಉಪ ನೋಂದಣಾಧಿಕಾರಿಗಳು, ಬಿದರಹಳ್ಳಿ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಅರ್ಜಿದಾರರು : ಶ್ರೀ ಎಸ್. ಸತೀಶ್ ಬಿನ್ ಶ್ರೀನಿವಾಸರೆಡ್ಡಿ, ಕಿತ್ತಗನೂರು ಗ್ರಾಮ, ಕೆ.ಆರ್.ಪುರ ಅಂಚೆ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ರವರಿಗೆ ದೃಢೀಕೃತ ಅಂಚೆ ಮೂಲಕ.
7. ಹೆಚ್ಚಿನ ಪ್ರತಿ

ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.